ದಿನಾಂಕ : 02-10-2020 ನೇ ಶುಕ್ರವಾರದಂದು ಗಾಂಧಿ ಜಯಂತಿ ಕಾರ್ಯಕ್ರಮದ ಪ್ರಯುಕ್ತ ಗ್ರಾಮ ವಿದ್ಯಾ ಪ್ರಚಾರಕ ಸಂಘದ ವತಿಯಿಂದ ಪೂಜ್ಯ ಶ್ರೀ ಎಸ್. ಕರಿಯಪ್ಪ ಸಭಾಂಗಣದಲ್ಲಿ ನಡೆದ ಸಮಾರಂಭದಲ್ಲಿ ಸುಮಾರು 15 ಎನ್.ಸಿ.ಸಿ. ಕೆಡೆಟ್‌ಗಳು ಭಾಗವಹಿಸಿದ್ದು, ಪೈಲಟಿಂಗ್ ಮಾಡಿದರು ಹಾಗೂ ಕಾರ್ಯಕ್ರಮಕ್ಕೆ ಹಾಜರಾದವರ ಥರ್ಮಲ್ ಸ್ಕ್ರೀನಿಂಗ್ ಮತ್ತು ಹ್ಯಾಂಡ್ ಸ್ಯಾನಿಟೈಸರ್ ನೀಡುವ ಕಾರ್ಯ ನಿರ್ವಹಿಸಿದರು. ಈ ಕಾರ್ಯಕ್ರಮದಲ್ಲಿ ಪದವಿ ಕಾಲೇಜಿನ ಪ್ರಾಂಶುಪಾಲರಾದ ಡಾ.ಎಂ.ಗೋವಿಂದಪ್ಪರವರು ಗಾಂಧೀ ಜಯಂತಿ ಕುರಿತು ಉಪನ್ಯಾಸ ನೀಡಿದರು ಹಾಗೂ ಆರ್.ಎಂ.ಪಿ.ಹೆಚ್.ಎಸ್ ಶಾಲೆಯ ಗುರುಮೂರ್ತಿರವರು ಲಾಲ್ ಬಹದ್ದೂರ್ ಶಾಸ್ತ್ರಿ ಕುರಿತು ಉಪನ್ಯಾಸ ನೀಡಿದರು. ನಂತರ ರೂರಲ್ ಕಾಲೇಜಿನ ಸುಬ್ಬರಾವ್ ಸಭಾಂಗಣದಲ್ಲಿ ಸಸಿ ನೆಡುವ ಕಾರ್ಯಕ್ರಮದಲ್ಲಿ ಭಾಗವಹಿಸಿದರು. ನಂತರ ಎನ್.ಸಿ.ಸಿ. ಕಛೇರಿಯ ಮುಂದೆ ಸ್ವಚ್ಛತಾ ಕಾರ್ಯ ನಡೆಸಿದರು. ಈ ಕಾರ್ಯಕ್ರಮದಲ್ಲಿ ನಮ್ಮ ಸಂಸ್ಥೆಯ ಅಧ್ಯಕ್ಷರಾದ ಶ್ರೀ ಕೆ. ಬಿ. ನಾಗರಾಜು, ಉಪಾಧ್ಯಕ್ಷರಾದ ಶ್ರೀ ಎಂ. ಎಲ್. ಶಿವಕುಮಾರ್, ಖಜಾಂಚಿಗಳಾದ ಶ್ರೀ ಪುಟ್ಟಸ್ವಾಮಿ, ಪ್ರಾಂಶುಪಾಲರು, ಎಲ್ಲಾ ಅಂಗ ಸಂಸ್ಥೆಗಳ ಮುಖ್ಯಸ್ಥರು, ಬೋಧಕರು/ಬೋಧಕೇತರರು ಹಾಗೂ ಎನ್.ಸಿ.ಸಿ., ಎನ್.ಎಸ್.ಎಸ್. ಅಧಿಕಾರಿಗಳು ಭಾಗವಹಿಸಿದ್ದರು.

ಪ್ರಾಂಶುಪಾಲರು 12/12/2020